



ದಿನಾಂಕ: 16-11-2024 ರಂದು ಮಕ್ಕಳಿಗೆ ಶಾಲಾ ಅವಧಿ ಅತ್ಯಂತ ಅಮೂಲ್ಯವಾದದ್ದು ಶಾಲೆಗೆ ಬೇರೆ ಬೇರೆ ಆರ್ಥಿಕ, ಸಾಮಾಜಿಕ ಹಿನ್ನೆಲೆಯಿಂದ ಶಾಲೆಗೆ ವಿದ್ಯಾರ್ಥಿಗಳು ಬರುತ್ತಾರೆ ಅವರ ಎಲ್ಲ ಸಮಸ್ಯೆಗಳಿಗೆ ಶಿಕ್ಷಣ ಒಂದೇ ಪರಿಹಾರ. ಉತ್ತಮ ಶಿಕ್ಷಣ ಪಡೆದಾಗ ಮಾತ್ರ ಸಾಮಾಜಿಕವಾಗಿ ಆರ್ಥಿಕವಾಗಿ ಸರ್ವ ಸಮಾನತೆ ಸಾಧ್ಯವಾಗುತ್ತದೆ ಆ ನಿಟ್ಟಿನಲ್ಲಿ ಸಚಿವರು ಹೆಚ್ಚು ಆದ್ಯತೆ ನೀಡಿ ಕೆಲಸ ಮಾಡುವಂತಾಗಲಿ ಎಂದು ಮಾನ್ಯ ಸಭಾಪತಿ ಶ್ರೀ ಬಸವರಾಜ ಎಸ್ ಹೊರಟ್ಟಿ ಅವರು ಪ್ರಾಥಮಿಕ ಹಾಗು ಪ್ರೌಢ ಶಿಕ್ಷಣ ಸಚಿವರಾದ ಮಧು ಬಂಗಾರಪ್ಪನವರಿಗೆ ಸಲಹೆ ನೀಡಿದರು.

ಅವರು ಇಂದು ಸಚಿವ ಬಂಗಾರಪ್ಪನವರ ಮನೆಗೆ ಬೆಳಿಗ್ಗೆ ಔಪಚಾರಿಕವಾಗಿ ಭೇಟಿ ನೀಡಿ ಉಪಹಾರ ಸೇವಿಸಿ ಪ್ರಸ್ತುತ ಶೈಕ್ಷಣಿಕ ಸಮಸ್ಯೆಗಳ ಕುರಿತು ತಮ್ಮ ನಾಲ್ಕು ದಶಕಗಳ ಸುದೀರ್ಘ ಅನುಭವವನ್ನು ಹಂಚಿಕೊಂಡರು. ಸ್ಪರ್ಧಾತ್ಮಕ ಯುಗದಲ್ಲಿ ಶಿಕ್ಷಣಕ್ಕೆ ಹೆಚ್ಚು ಮಹತ್ವವಿದೆ ಪ್ರತಿಶತ ಎಪ್ಪತ್ತು ಪರ್ಸೆಂಟ್ ಮಕ್ಕಳು ಸರ್ಕಾರಿ ಶಾಲೆಯನ್ನೇ ಅವಲಂಬಿಸಿದ್ದಾರೆ. ಆ ಎಲ್ಲ ಮಕ್ಕಳ ಹಿತ ಕಾಯುವುದು ನಮ್ಮ ನಿಮ್ಮೆಲ್ಲರ ಜವಾಬ್ದಾರಿ .ತಾವು ಸಹ ಈಗಾಗಲೇ ಸಾಕಷ್ಟು ಕ್ರಿಯಾಶೀಲರಾಗಿ ಕೆಲಸ ಮಾಡುತ್ತಿದ್ದೀರಿ ಇನ್ನಷ್ಟು ಸಮಯವನ್ನು ಶೈಕ್ಷಣಿಕ ಕ್ಷೇತ್ರಕ್ಕಾಗಿ ಮೀಸಲಿಟ್ಟು ಕೆಲಸ ಮಾಡಿದರೆ ತಮ್ಮ ಹೆಜ್ಜೆ ಗುರುತುಗಳು ಈ ನಾಡಿನಲ್ಲಿ ಶಾಶ್ವತವಾಗಿ ಉಳಿಯುತ್ತವೆ. ಇದೊಂದು ತಮಗೆ ಸಿಕ್ಕ ದೊಡ್ಡ ಅವಕಾಶ ಇದರ ಸದುಪಯೋಗ ಮಾಡಿಕೊಂಡು ನಾಡಿನ ಮಕ್ಕಳ ಭವಿಷ್ಯಕ್ಕಾಗಿ ತಾವು ನಿತ್ಯಶ್ರಮಿಸಬೇಕೆಂದು ತಮ್ಮ ಮನದಾಳದ ಮಾತುಗಳನ್ನು ಸಚಿವರೊಂದಿಗೆ ಹಂಚಿಕೊಂಡರು.